# ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಮತ್ತು ಪದವಿ ಪೂರ್ವ ಕಾಲೇಜು ಉಪಪ್ರಾಂಶುಪಾಲರ ಸಂಘ (ರಿ)

SSLC MIDTERM EXAMINATION SEPTEMBER 2019

**ಹತ್ತನೆಯ ತರಗತಿ ಅರ್ಧವಾರ್ಷಿಕ ಪರೀಕ್ಷೆ – ಸೆಪ್ಟೆಂಬರ್ 2019**

Time : 3 hours ವಿಷಯ : ಪ್ರಥಮಭಾಷೆ ಕನ್ನಡ. Max Marks : - 100

Total No. of Questions : 45 CCE RF Code No. 01-K

## –: ಮಾದರಿ ಉತ್ತರಗಳು :–

**1.** ಇವುಗಳಲ್ಲಿ ಸಪ್ತಮೀ ವಿಭಕ್ತಿಯಿಂದ ಕೂಡಿರುವ ಪದ ;

(ಎ) ಮಳೆಗಾಲ (ಬಿ) ಊರೂರು **(ಸಿ) ಶಾಲೆಯಲ್ಲಿ** (ಡಿ) ಮರವನ್ನು

**2.** 'ಬೃಹಚ್ಛತ್ರ' ಪದವು ಈ ಸಂಧಿಗೆ ಉದಾಹರಣೆಯಾಗಿದೆ;

(ಎ) ಜಶ್ತ್ವ **(ಬಿ) ಶ್ಚುತ್ವ** (ಸಿ) ಅನುನಾಸಿಕ (ಡಿ) ಆದೇಶ

**3.** ಪಾರಿಭಾಷಿಕ, ಅನ್ಯಭಾಷೆಯ ಪದಗಳನ್ನು ಬಳಸುವಾಗ, ಪ್ರಮುಖ ಪದಗಳನ್ನು ಸೂಚಿಸುವಾಗ ಈ ಲೇಖನಚಿಹ್ನೆಯನ್ನು ಬಳಸಲಾಗುವುದು;

(ಎ) ಪೂರ್ಣವಿರಾಮ (ಬಿ) ಅಲ್ಪವಿರಾಮ **(ಸಿ) ವಾಕ್ಯವೇಷ್ಟನ** (ಡಿ) ಆವರಣ

**4.** ಸ್ವತಂತ್ರ ವಾಕ್ಯಗಳಾಗಿ ನಿಲ್ಲಬಲ್ಲ ಅನೇಕ ಉಪವಾಕ್ಯಗಳೊಡನೆ ಒಂದು ಪೂರ್ಣಾಭಿಪ್ರಾಯದ ವಾಕ್ಯವಾಗಿದ್ದರೆ ಅಂತಹ ವಾಕ್ಯ;

(ಎ) ಸಾಮಾನ್ಯ ವಾಕ್ಯ (ಬಿ) ಮಿಶ್ರ ವಾಕ್ಯ **(ಸಿ) ಸಂಯೋಜಿತ ವಾಕ್ಯ** (ಡಿ) ಪ್ರಶ್ನಾರ್ಥಕ ವಾಕ್ಯ

**5.** 'ಮಾದ್ರಮಾಗಧಯಾದವರು' ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ;

(ಎ) ಕರ್ಮಧಾರಯ **(ಬಿ) ದ್ವಂದ್ವ** (ಸಿ) ತತ್ಪುರುಷ (ಡಿ) ಬಹುವ್ರೀಹಿ

**6.** 'ಆದ್ದರಿಂದ' ಪದವು ಈ ಅವ್ಯಯಕ್ಕೆ ಉದಾಹರಣೆಯಾಗಿದೆ ;

(ಎ) ಅನುಕರಣಾವ್ಯಯ (ಬಿ) ಸಾಮಾನ್ಯಾವ್ಯಯ **(ಸಿ) ಸಂಬಂಧಾರ್ಥಕಾವ್ಯಯ** (ಡಿ) ಅನುಕರಣಾವ್ಯಯ

**II. ಕೆಳಗಿನ ಪ್ರಶ್ನೆಗಳಿಗೆ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ.** **4*1=4**

**7.** ಕೊಡಲಿ : ಕುಠಾರ :: ಸಕ್ಕರೆ : **ಶರ್ಕರ**

**8.** ಮೇಜು : ಪೋರ್ಚುಗೀಸ್ :: ಕಾರ್ಖಾನೆ : **ಹಿಂದೂಸ್ಥಾನಿ**

**9.** ಶೌರಿ : ಕೃಷ್ಣ :: ಮೇಧಿನಿ : **ಭೂಮಿ**

**10.** ಬಟ್ಟಬಯಲು : ದ್ವಿರುಕ್ತಿ :: ಕೆನೆಮೊಸರು : **ಜೋಡುನುಡಿ**

**III. ಕೆಳಗಿನ ಪ್ರಶ್ನೆಗಳಿಗೆ ಪ್ರತಿಯೊಂದಕ್ಕೂ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ.** **07*1=07**

**11.** ಗಡಿ ಪ್ರದೇಶದಲ್ಲಿ 'ಬ್ಲಾಕ್ ಔಟ್' ನಿಯಮವನ್ನು ಏತಕ್ಕಾಗಿ ಪಾಲಿಸಲಾಗುತ್ತದೆ ?

ಉತ್ತರ : ಗಡಿ ಪ್ರದೇಶದಲ್ಲಿ ವಿಮಾನ ದಾಳಿಯಿಂದ ರಕ್ಷಿಸಿಕೊಳ್ಳಲು 'ಬ್ಲಾಕ್ ಔಟ್' ನಿಯಮವನ್ನು ಪಾಲಿಸಲಾಗುತ್ತದೆ.

**12.** ರಾಮಲಕ್ಷ್ಮಣರಿಗೆ ಮತಂಗಾಶ್ರಮಕ್ಕೆ ಹೋಗಲು ಸೂಚಿಸಿದವರು ಯಾರು ?

ಉತ್ತರ : ರಾಮಲಕ್ಷ್ಮಣರಿಗೆ ಮತಂಗಾಶ್ರಕ್ಕೆ ಹೋಗಲು ಸೂಚಿಸಿದವರು ದಂಡಕಾರಣ್ಯದಲ್ಲಿ ವಾಸಮಾಡುತ್ತಿದ್ದ ಕಬಂಧ ಎಂಬ ಹೆಸರಿನ (ಧನುಮಹರ್ಷಿ) ರಾಕ್ಷಸ.

**13.** ರಾಮಲಕ್ಷ್ಮಣರು ಶಬರಿಯ ರೂಪದಲ್ಲಿ ಯಾರನ್ನು ಕಂಡರು ?

ಉತ್ತರ : ರಾಮಲಕ್ಷ್ಮಣರು ಆಶ್ರಮವನ್ನೇ ಅಯೋಧ್ಯೆ ಎಂದುಕೊಂಡರು ಮತ್ತು ಶಬರಿಯ ರೂಪದಲ್ಲಿ ತಮ್ಮ ತಾಯಿಯನ್ನು ಕಂಡರು.

**14.** ಎಂಜಿನಿಯರ್ಸ್ ದಿನಾಚರಣೆಯನ್ನು ಯಾರ ನೆನಪಿಗಾಗಿ ಆಚರಿಸಲಾಗುತ್ತದೆ ?
ಉತ್ತರ : ಎಂಜಿನಿಯರ್ಸ್ ದಿನಾಚರಣೆಯನ್ನು ಸರ್ ವಿಶ್ವೇಶ್ವರಯ್ಯನವರ ನೆನಪಿಗಾಗಿ ಆಚರಿಸಲಾಗುತ್ತದೆ.

**15.** ಕವಿ ಶಿವರುದ್ರಪ್ಪರವರು ಯಾವುದು ಕಲುಷಿತವಾಗಿದೆ ಎಂದಿದ್ದಾರೆ ?
ಉತ್ತರ : ಕವಿ ಜಿ ಎಸ್ ಶಿವರುದ್ರಪ್ಪನವರು ನದಿಜಲಗಳು ಕಲುಷಿತವಾಗಿದೆ ಎಂದಿದ್ದಾರೆ.

**16.** ಹಲಗಲಿ ಲಾವಣಿಗೆ ಕಾರಣವಾದ ಘಟನೆ ಯಾವುದು ?
ಉತ್ತರ : ಹಲಗಲಿಯ ಲಾವಣಿಗೆ ನಿಶ್ಶಸ್ತ್ರೀಕರಣ ಕಾಯ್ದೆ ವಿರೋಧಿಸಿದ 'ಹಲಗಲಿ ಭಂಟರ ಹತಾರ ಕದನ' ಕಾರಣವಾಗಿದೆ.

**17.** ಪುಟ್ಟ ಪೋರಿ ಏನು ಮಾಡುತ್ತಿದ್ದಾಳೆ ?
ಉತ್ತರ : ಪುಟ್ಟ ಪೋರಿ ಒಡೆಯನ ಮನೆಯಲ್ಲಿ ಮುಸುರೆ ತಿಕ್ಕುತ್ತಿದ್ದಾಳೆ.

**IV. ಕೆಳಗಿನ ಪ್ರಶ್ನೆಗಳಿಗೆ ಮೂರು – ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ. 10*2=20**

**18.** ನಿರ್ಜೀವವಾಗಿರುವ ಮಗುವನ್ನು ನೋಡಿ ಮುದುಕಿ ನಿರಾಶೆಯಿಂದ ಹೇಳಿದ್ದೇನು ?
ಉತ್ತರ : ನಿರ್ಜೀವವಾಗಿರುವ ಮಗುವನ್ನು ನೋಡಿ ಮುದುಕಿ "ಇಷ್ಟು ವರ್ಷಗಳಿಂದ ಹಂಬಲಿಸಿ ಹುಟ್ಟಿದ ಮಗು ಕೊನೆಗೂ ದಕ್ಕಲಿಲ್ಲವಲ್ಲ? ಈ ಯುದ್ಧವಿಲ್ಲದೇ ಹೋಗಿದ್ದರೆ ನನ್ನ ಮಗುವನ್ನು ಹೇಗಾದರೂ ಬದುಕಿಸಿಕೊಳ್ಳುತ್ತಿದ್ದೆವಲ್ಲ ದೇವರೇ ? ಈ ಮನುಷ್ಯರಿಗೆ ಎಂತಹ ಬುದ್ಧಿ ಕೊಡುತ್ತಿಯಾ?" ನಿರಾಶೆಯಿಂದ ಹೇಳಿದಳು.

**19.** ರಾಮಲಕ್ಷ್ಮಣರ ಸ್ವಾಗತಕ್ಕಾಗಿ ಶಬರಿ ಮಾಡಿಕೊಂಡಿದ್ದ ಸಿದ್ಧತೆಗಳೇನು ?
ಉತ್ತರ : ಗುರು ಮತಂಗರ ಆಣತಿಯಂತೆ ರಾಮಲಕ್ಷ್ಮಣರ ಆಗಮನಕ್ಕಾಗಿ ಕಾಯುತ್ತ ಅವರ ಸ್ವಾಗತಕ್ಕಾಗಿ ಶಬರಿಯು ಸವಿಯಾದ ಬಗೆಬಗೆಯ ಹಣ್ಣುಗಳನ್ನು, ಜೇನುತುಪ್ಪ ಅಧಿಕವಾಗಿರುವ ಮಧುಪರ್ಕವೆಂಬ ಪಾನೀಯವನ್ನು, ಸುವಾಸನೆಯಿಂದ ಕೂಡಿದ ಬಾಡದ ಹೂವುಗಳನ್ನು ಸಂಗ್ರಹಿಸಿ ಸಿದ್ಧಮಾಡಿಕೊಂಡಿದ್ದಳು.

**20.** ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ನೀರಾವರಿ ಯೋಜನೆಗಳು ಕಾರ್ಯರೂಪಕ್ಕೆ ಬಂದವು?
ಉತ್ತರ : ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ 1900ರಲ್ಲಿ ಶಿವನಸಮುದ್ರ ಬಳಿ ಕಾವೇರಿ ನದಿ ನೀರಿನಿಂದ ಪಾರಂಭಿಸಿದ ಶಿವನಸಮುದ್ರ ಜಲವಿದ್ಯುತ್ ಯೋಜನೆ, 1907ರಲ್ಲಿ ವಾಣಿ ವಿಲಾಸ ಸಾಗರ ಆಣೆಕಟ್ಟು (ಮಾರಿ ಕಣಿವೆ) ಮತ್ತು 1911ರಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಕನ್ನಂಬಾಡಿಯಲ್ಲಿ ಕೃಷ್ಣರಾಜ ಸಾಗರ ಆಣೆಕಟ್ಟು ನಿರ್ಮಾಣ ಮುಂತಾದ ವಿದ್ಯುತ್ ಮತ್ತು ನೀರಾವರಿ ಯೋಜನೆಗಳು ಕಾರ್ಯರೂಪಕ್ಕೆ ಬಂದವು.

**21.** ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯ ಅವರು ಏನೆಂದು ಹೇಳಿದ್ದಾರೆ ?
ಉತ್ತರ : ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯ ಅವರು "ಆಧುನಿಕ ಶಿಕ್ಷಣವೇ ಎಲ್ಲ ಸಮಸ್ಯೆಗಳಿಗೂ ಪರಮೋಚ್ಚ ಪರಿಹಾರ, ಶಿಕ್ಷಣವು ಸಂಜೀವಿನಿ, ಶಿಕ್ಷಣಕ್ಕಾಗಿ ಶಿಕ್ಷಣವಿರಬೇಕು. ಅದು ಕೆಲವೇ ಜನರ ಸೊತ್ತಾಗದೆ ಪ್ರಗತಿಪರ ರಾಜ್ಯದಲ್ಲಿ ಎಲ್ಲರ ಆಜನ್ಮಸಿದ್ಧ ಹಕ್ಕಾಗಬೇಕು" ಎಂದು ಹೇಳಿದ್ದಾರೆ.

**22.** ಹಕ್ಕಿಯು ಹೊಸಗಾಲದ ಹಸುಮಕ್ಕಳನ್ನು ಹರಸಿದ ರೀತಿಯನ್ನು ತಿಳಿಸಿ.
ಉತ್ತರ : ಕಾಲವು ಯುಗಯುಗಗಳ ಹಣೆಬರೆಹವನ್ನು, ಅಳಿಸಿ ಹಾಕಿ ಹೊಸತನವನ್ನು (ಒಳ್ಳೆತನವನ್ನು) ಹೊಸ ಹಣೆಬರೆಹವನ್ನು ಬರೆದು ಎಲ್ಲರಿಗೂ ಬದಲಾವಣೆಯಾಗುವ ಒಳ್ಳೆಯ ಭಾಗ್ಯವನ್ನು ತೆರೆದು ಕೊಟ್ಟಿದೆ. ಹಾಗೆಯೇ ರೆಕ್ಕೆಯ ಬೀಸುತ , ಮೇಲಕ್ಕೆ ಹಾರುತ, ಹಾರುವ ಈ ಹೊಸಗಾಲದ ಹಸು ಮಕ್ಕಳಿಗೆ ಹೊಸ ಚೇತನವನ್ನು (ಶಕ್ತಿಯನ್ನು) ನೀಡುತ್ತ , ಉತ್ತಮ ಭವಿಷ್ಯಕ್ಕಾಗಿ ಶುಭ ಹರಸಿದೆ.

**23.** ಹಲಗಲಿಯ ಬೇಡರು ದಂಗೆ ಏಳಲು ಕಾರಣವೇನು ?
ಉತ್ತರ : ಕ್ರಿ.ಶ. 1857ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ನಂತರ ಕುಂಪಣಿ ಸರಕಾರ ನಿಶ್ಶಸ್ತ್ರೀಕರಣ ಕಾಯ್ದೆಯಡಿ ಎಲ್ಲ ಜನರಿಗೆ ಜೋರ ಮಾಡಿ ಕಸಿದು ಕೊಳ್ಳಿರಿ ಹತಾರ ಎಂಬ ಆದೇಶ ಹೊರಡಿಸಿತು. ಈ ಆದೇಶದ ಪ್ರಕಾರ ಕುಂಪಣಿ ಸರ್ಕಾರದ ಅಧಿಕಾರಿಗಳು ಹಲಗಲಿಗೆ ಬಂದು ಜೋರ ಮಾಡಿ ಬೇಡರ ಆಯುಧಗಳನ್ನು ಕಸಿದುಕೊಳ್ಳಲು ಹೋದರು.

ಇದನ್ನು ವಿರೋಧಿಸಿ ರಾಮ, ಬಾಲ, ಹನುಮ, ಜಡಗ ಮೊದಲಾದ ಹಲಗಲಿ ಬೇಡರು ತಮ್ಮಲ್ಲಿರುವ ಆಯುಧಗಳನ್ನು ಕೊಡಲೊಪ್ಪದೆ ದಂಗೆ ಎದ್ದರು.

**24**. ಜಾತಿ ವ್ಯವಸ್ಥೆಯ ಬಗೆಗೆ ವಿವೇಕಾನಂದರ ಅಭಿಪ್ರಾಯವೇನು ?

ಉತ್ತರ : ಸ್ವಾಮಿ ವಿವೇಕಾನಂದರು "ಜಾತಿ ಎಂಬುದು ಸಮಾಜದ ಒಂದು ಆಂತರಿಕ ಭಾಗವಾಗಿದೆ. ಹಿಂದೆ ಅದು ವಿಕಾಸವಾಗುತ್ತಿತ್ತು. ಈಗ ಅದು ಘನೀಭೂತವಾಗಿದೆ. ಅದರ ದುರ್ಗಂಧದಿಂದ ಭಾರತದ ವಾತಾವರಣವೆಲ್ಲ ತುಂಬಿದೆ. ಶೂದ್ರರು, ಅಸ್ಪೃಶ್ಯರು ಜಾತಿ ವ್ಯವಸ್ಥೆಯ ಕ್ರೌರ್ಯಕ್ಕೆ ತುತ್ತಾಗಿದ್ದಾರೆ. ಇದರಿಂದ ಅವರು ಸ್ವಾತಂತ್ರ್ಯಹೀನರಾಗಿ ಗುಲಾಮತನ ಅನುಭವಿಸುತ್ತಿದ್ದಾರೆ " ಎಂದು ಜಾತಿ ವ್ಯವಸ್ಥೆಯ ಬಗ್ಗೆ ಅಭಿಪ್ರಾಯಪಟ್ಟಿದ್ದಾರೆ.

**25**.ವಿವೇಕಾನಂದರ ವ್ಯಕ್ತಿತ್ವ ಇಂದಿಗೂ ಸತ್ಯ ಏಕೆ ?

ಉತ್ತರ : ಸ್ವಾಮಿ ವಿವೇಕಾನಂದರ 'ಧೀರೋದಾತ್ತ' ನಿಲುವುಗಳು ವೈಯಕ್ತಿಕ ಮಾತ್ರವಾಗಿರದೆ ಸಾಮಾಜಿಕವಾಗಿ ರೂಪಾಂತರಗೊಂಡು ಗಟ್ಟಿಯಾಗಿರುವಂತವು. ಅವರದು ಪ್ರಖರ ಸಾಮಾಜಿಕ ವ್ಯಕ್ತಿತ್ವ, ದೀನ ದಲಿತರ ಉದ್ಧಾರವೇ ಅವರ ಧರ್ಮದ ಮೊದಲ ತತ್ವ; ಅದೇ ಅವರ ವೈಚಾರಿಕ ಸತ್ವ ಆದ್ದರಿಂದ ವಿವೇಕಾನಂದರು ಮತ್ತು ಅವರ ವ್ಯಕ್ತಿತ್ವ ಇಂದಿಗೂ ಸತ್ಯ ಎನಿಸುವುದು.

**26**.ವಸಂತ ಯಾರು ಯಾರಿಗೆ ಮುಖ ತೋರಲಿಲ್ಲ ? ಹಾಗೂ ಪುಟ್ಟಿಯ ಮನದಲ್ಲಿ ಮೂಡಿದ ಪ್ರಶ್ನೆಗಳೇನು ?

ಉತ್ತರ : ಕಮ್ಮಾರನ ಕುಲುಮೆ ಉರಿಯಲಿಲ್ಲ. ಕುಂಬಾರನ ತಿಗುರಿ(ಚಕ್ರ) ತಿರುಗಲಿಲ್ಲ ನೇಕಾರನ ಮಗ್ಗ ಉಸಿರಾಡಲಿಲ್ಲ ಕೇರಿಯ ಮಾರನ ಒಲೆ ಹೊತ್ತಲಿಲ್ಲ ಇವರಾರಿಗೂ ವಸಂತ ಮುಖ ತೋರಲಿಲ್ಲ ! ಪುಟ್ಟಿ ಮತ್ತೆ ಮತ್ತೆ ನೆಲವ ತಟ್ಟಿ ಗುಡಿಸಲೊಳಗೆ ಬರಲು ವಸಂತ ಹೆದರಿದನೆ ? ಹರಿದ ಚಿಂದಿ ಬಟ್ಟೆಗಳ ಕಂಡು ಅವನು ಮರುಗಿದನೆ? ಎಂದು ಪ್ರಶ್ನಿಸಿಕೊಳ್ಳುತ್ತಾಳೆ.

**27**. ಭಗತ್ ಸಿಂಗ್ ಹಾಗೂ ಅವನ ಸಹಚರರು ಹೇಗೆ ಅಮರರಾದರು ?

ಉತ್ತರ : ಜಲಿಯನ್ ವಾಲಾಬಾಗಿನ ರಕ್ತಸಿಕ್ತವಾಗಿದ್ದ ಮಣ್ಣನ್ನು ನಿಧಿಯಂತೆ ಕಾಪಾಡಿಕೊಂಡು ಬಂದಿದ್ದ ಬಾಲಕ ಭಗತ್‌ಸಿಂಗ್ ಮುಂದೆ ತನ್ನ ಕ್ರಾಂತಿಕಾರಿ ಗುಂಪಿನ ಸಹಾಯದಿಂದ ಬ್ರಿಟಿಷ್ ಸರ್ಕಾರದ ವಿರುದ್ಧ ತನ್ನ ಸೇಡನ್ನು ತೀರಿಸಿಕೊಳ್ಳುತ್ತಾನೆ. ಇದರ ಫಲವಾಗಿ ಮರಣ ದಂಡನೆಗೆ ಈಡಾಗಿ ತನ್ನ ಸಹಚರರಾದ ಸುಖ್‌ದೇವ್ , ರಾಜ್‌ಗುರು, ಭಟುಕೇಶ್ವರ ದತ್ತರೊಂದಿಗೆ ಹಸನ್ಮುಖಿಯಾಗಿ ತಾಯಿ ಭಾರತಾಂಬೆಯ ಸ್ವಾತಂತ್ರ್ಯದ ಹಣತೆಗೆ ತೈಲವೆಂಬಂತೆ ವೀರಯೋಧನಾಗಿ ಅಮರನಾದನು.

**V. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ. 6*3=18**

**28**."ಆಗಲೂ ಯುದ್ಧವಾಗಿತ್ತಾ ಅಜ್ಜಿ ?"

**ಆಯ್ಕೆ :–** ಈ ವಾಕ್ಯವನ್ನು 'ಶ್ರೀಮತಿ ಸಾರಾ ಅಬೂಬಕ್ಕರ್' ಅವರ 'ಚಪ್ಪಲಿಗಳು' ಕಥಾಸಂಕಲನದಿಂದ ಆಯ್ದ 'ಯುದ್ಧ' ಎಂಬ ಪಾಠದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:–** ಈ ಮಾತನ್ನು ವೈದ್ಯ ಸೈನಿಕನಾದ ರಾಹಿಲನು ಮುದುಕಿಗೆ ಹೇಳಿದನು. ಯುದ್ಧದಲ್ಲಿ ಗಾಯಗೊಂಡು ಸಮುದ್ರಕ್ಕೆ ಬಿದ್ದ ರಾಹಿಲನು ಈಜುತ್ತ ದಡವನ್ನು ಸೇರುತ್ತಾನೆ. ದಡದಲ್ಲಿದ್ದ ಒಂಟಿ ಮನೆಯನ್ನು ನೋಡಿ ಅಲ್ಲಿಗೆ ಬರುತ್ತಾನೆ. ಹಾಗೂ ಮನೆಯಲ್ಲಿ ಆದ ಸಮಸ್ಯೆಗೆ ಸಹಾಯ ಮಾಡುತ್ತಾನೆ ಹಾಗೂ ಆಶ್ರಯ ಪಡೆಯುತ್ತಾನೆ. ಹಾಗೂ ಪರಸ್ಪರರ ಬಗ್ಗೆ ತಿಳಿದುಕೊಳ್ಳುವಾಗ ಮುದುಕಿಯು ತನ್ನ ಹಾಗೂ ಗಂಡ ಮಗನ ಬಗ್ಗೆ ಹೇಳುತ್ತಾಳೆ ಮತ್ತು ಯುದ್ಧದ ಬಗ್ಗೆ ತಿರಸ್ಕಾರದಿಂದ ಮಾತನಾಡುತ್ತಾಳೆ ಆಗ ರಾಹಿಲ ಈ ಮೇಲಿನಂತೆ ಹೇಳುತ್ತಾನೆ.

**ಸ್ವಾರಸ್ಯ :–** ಯುದ್ಧದ ಸಂದರ್ಭದಲ್ಲಿ ಗಾಯಗೊಂಡಿರುವ ರಾಹಿಲನ ಯುದ್ಧದ ಬಗೆಗೆ ತಿರಸ್ಕಾರ ಭಾವ ಮತ್ತು ಅದರ ವ್ಯಾಪ್ತಿ ಮತ್ತು ಪರಿಣಾಮ ಸ್ವಾರಸ್ಯಪೂರ್ಣವಾಗಿ ಇಲ್ಲಿ ಅಭಿವ್ಯಕ್ತಗೊಂಡಿದೆ.

**29**."ಬೆಳಕಿಗೊಲಿದವರ್ ಉರಿವ ಬತ್ತಿಯ ಕರುಕ ಕಾಣರು"

**ಆಯ್ಕೆ** : ಈ ವಾಕ್ಯವನ್ನು ಪು. ತಿ. ನರಸಿಂಹಾಚಾರ್ ಅವರು ರಚಿಸಿರುವ 'ಶಬರಿ' ಗೀತನಾಟಕದಿಂದ ಆಯ್ದ 'ಶಬರಿ' ಎಂಬ ಗದ್ಯಭಾಗದಿಂದ ಆರಿಸಲಾಗಿದೆ.

**ಸಂದರ್ಭ** : ತನ್ನ ಜೀವನದ ಅಂತಿಮ ಆಸೆ ಗುರಿಯಾದ ರಾಮನ ದರ್ಶನ ಭಾಗ್ಯದಿಂದ ಸಂತುಷ್ಟಳಾದ ಶಬರಿಯು ಮುಕ್ತಿಯನ್ನು ಪಡೆಯುವುದಕ್ಕಾಗಿ ಅಗ್ನಿ ಪ್ರವೇಶಿಸಿದ ಸಂದರ್ಭದಲ್ಲಿ ರಾಮನು ಈ ಮಾತನ್ನು ತನ್ನ ಸಹೋದರನಾದ ಲಕ್ಷ್ಮಣನಿಗೆ ಹೇಳುತ್ತಾನೆ.

**ಸ್ವಾರಸ್ಯ** : "ಬೆಳಕಿಗೆ ಒಲಿದವರು ಉರಿವ ಬತ್ತಿಯ ಕಪ್ಪನ್ನು ನೋಡುವುದಿಲ್ಲ" ಎಂಬ ಮಾತು ಶಬರಿಯ ರಾಮಭಕ್ತಿಯ ಶ್ರೇಷ್ಠತೆಯನ್ನು ಬಹುಸ್ವಾರಸ್ಯಪೂರ್ಣವಾಗಿ ವರ್ಣಿಸುತ್ತದೆ.

**30.** "ತಾವು ಕಡಿಮೆ ಮಾತನಾಡಿದ್ದೀರಿ; ಹೆಚ್ಚು ಕೆಲಸ ಮಾಡಿದ್ದೀರಿ"

**ಆಯ್ಕೆ :** ಈ ವಾಕ್ಯವನ್ನು "ಭಾಗ್ಯಶಿಲ್ಪಿಗಳು" ಪಾಠದ ಭಾಗವಾಗಿ ಶ್ರೀ ಡಿ. ಎಸ್. ಜಯಪ್ಪ ಗೌಡ ಅವರು ರಚಿಸಿರುವ "ದಿವಾನ್ ಸರ್ ಎಂ. ವಿಶ್ವೇಶ್ವರಯ್ಯನವರ ಕಾರ್ಯಸಾಧನೆಗಳು" ಎಂಬ ಕೃತಿಯಿಂದ ಆಯ್ದು ಕೊಟ್ಟಿರುವ "ಸರ್.ಎಂ.ವಿಶ್ವೇಶ್ವರಯ್ಯ" ಎಂಬ ಪಾಠಭಾಗದಿಂದ ಆರಿಸಲಾಗಿದೆ.

**ಸಂದರ್ಭ :** ವಿಶ್ವೇಶ್ವರಯ್ಯನವರ ಶತಮಾನೋತ್ಸವ ಸಮಾರಂಭದಲ್ಲಿ ಭಾಗವಹಿಸಿದ್ದ ಭಾರತದ ಪ್ರಧಾನ ಮಂತ್ರಿಗಳಾದ ಪಂಡಿತ್ ಜವಾಹರಲಾಲ್ ನೆಹರೂ ಅವರು ಸರ್. ಎಂ. ವಿಶ್ವೇಶ್ವರಯ್ಯ ಅವರ ಬಗ್ಗೆ "ದುರ್ದೃಷ್ಟವಶಾತ್ ಭಾರತೀಯರಾದ ನಾವು ಹೆಚ್ಚು ಮಾತನಾಡುವವರು ಮತ್ತು ನುಡಿದಂತೆ ನಡೆಯಲಾರದವರೆಂಬ ದೂಷಣೆಗೆ ಒಳಗಾಗಿದ್ದೇವೆ. ತಾವು ಈ ಮಾತಿಗೆ ಬಹುದೊಡ್ಡ ರೀತಿಯಲ್ಲಿ ಹೊರತಾಗಿದ್ದೀರಿ. ತಾವು ಕಡಿಮೆ ಮಾತನಾಡಿದ್ದೀರಿ ; ಹೆಚ್ಚು ಕೆಲಸ ಮಾಡಿದ್ದಿರಿ. ಅದನ್ನು ನಾವು ತಮ್ಮಿಂದ ಕಲಿಯೋಣ". ಎಂದು ಹೇಳಿದ ಸಂದರ್ಭವಾಗಿದೆ.

**ಸ್ವಾರಸ್ಯ :** ಈ ವಾಕ್ಯವು "ನುಡಿಗಿಂತ ನಡೆ ಲೇಸು" ಎಂಬ ಅರ್ಥದೊಂದಿಗೆ ವಿಶ್ವೇಶ್ವರಯ್ಯನವರ ವಾಸ್ತವ ಚಿಂತನೆ, ಕಾರ್ಯತತ್ಪರತೆ, ನಿಸ್ವಾರ್ಥ ನಡೆತೆಯನ್ನು ಸ್ವಾರಸ್ಯಭರಿತವಾಗಿ ವರ್ಣಿಸಿದೆ.

**31.** "ಹೊಸ ಎಚ್ಚರದೊಳು ಬದುಕೋಣ"

**ಆಯ್ಕೆ :** ಈ ವಾಕ್ಯವನ್ನು ಕವಿ **ಶ್ರೀ ಜಿ. ಎಸ್. ಶಿವರುದ್ರಪ್ಪ** ಅವರು ರಚಿಸಿರುವ **'ಎದೆತುಂಬಿ ಹಾಡಿದೆನು'** ಕವನ ಸಂಕಲನ ದಿಂದ ಆಯ್ದ **'ಸಂಕಲ್ಪಗೀತೆ'** ಎಂಬ ಕವಿತೆಯಿಂದ ಆರಿಸಲಾಗಿದೆ.

**ಸಂದರ್ಭ :** ಕವಿಗಳು "ಜೀವನದಲ್ಲಿ ಧನಾತ್ಮಕ ಮನೋಭಾವನೆಯ ಧೃಡಸಂಕಲ್ಪವನ್ನು ಹೊಂದಿರಬೇಕು" ಎಂದು ಹೇಳುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :** "ಎಲ್ಲ ಮತಗಳು ಸಾಧನೆಯ ದಾರಿಗಳು (ಪಥಗಳು) ಎಂಬ ಎಚ್ಚರದಲ್ಲಿ ಬದುಕುವ ಸಂಕಲ್ಪ ಕೈಗೊಳ್ಳುವುದರಿಂದ ದೇಶದಲ್ಲಿ ಶಾಂತಿಯು ನೆಲೆಸುವಂತೆ ಮಾಡಬಹುದು" ಎಂದು ಕವಿಗಳು ಸ್ವಾರಸ್ಯಪೂರ್ಣವಾಗಿ ತಮ್ಮ ಭಾವನೆಯನ್ನು ಅಭಿವ್ಯಕ್ತಪಡಿಸುತ್ತಾರೆ.

**32.** "ಕೆಟ್ಟು ವರ್ಣಿಸಿ ಹೇಳಿದೆ ಕಂಡಷ್ಟು"

**ಆಯ್ಕೆ :** ಈ ವಾಕ್ಯವನ್ನು ಡಾ. ಬಿ. ಎಸ್. ಗದ್ದಗಿಮಠ ಅವರು ಸಂಪಾದಿಸಿರುವ 'ಕನ್ನಡ ಜನಪದ ಗೀತೆಗಳು' ಕೃತಿಯಿಂದ ಆಯ್ದು ನೀಡಿರುವ 'ಹಲಗಲಿ ಬೇಡರು' ಎಂಬ ಪದ್ಯದಿಂದ ಆರಿಸಲಾಗಿದೆ.

**ಸಂದರ್ಭ :** ಬ್ರಿಟಿಷ್ ಸೈನಿಕರು ಹಲಗಲಿಯನ್ನು ಲೂಟಿಮಾಡಿ ಊರಿಗೆ ಬೆಂಕಿ ಇಟ್ಟು ಸುಟ್ಟು ಬೂದಿ ಮಾಡಿದ್ದರಿಂದ ಹಲಗಲಿಯು ಎಳ್ಳಷ್ಟು ಗುರುತು ಉಳಿಯದೆ ಕಾಣದೆ ಹಾಳಾಗಿ ಹೋಯಿತು. ಇದನ್ನು ಕುರ್ತುಕೋಟಿಯ ಕಲ್ಮೇಶನ ದಯದಿಂದ ನಾನು ಕಂಡಷ್ಟು ವರ್ಣಿಸಿ ಹೇಳಿದೆ ಎಂದು ಲಾವಣಿಕಾರ ಹಾಡಿದ ಸಂದರ್ಭವಾಗಿದೆ.

**ಸ್ವಾರಸ್ಯ :** ನಿಶ್ಶಸ್ತ್ರೀಕರಣ ಕಾಯ್ದೆ ವಿರೋದಿಸಿ ದಂಗೆ ಎದ್ದ ಹಲಗಲಿ ಬೇಡರು ಹೋರಾಡಿ ಕೆಟ್ಟು ಹೋದ ವಿಚಾರವನ್ನು ಕಂಡಷ್ಟು ವರ್ಣಿಸಿದ್ದೇನೆ ಎಂದು ಹೇಳಿರುವುದು ಸ್ವಾರಸ್ಯಪೂರ್ಣವಾಗಿದೆ.

**33.** "ಕುರುಪತಿಗೆ ಕೇಡಾದುದೆಂದನು ತನ್ನ ಮನದೊಳಗೆ"

**ಆಯ್ಕೆ** : ಈ ವಾಕ್ಯವನ್ನು ಕುಮಾರವ್ಯಾಸ ವಿರಚಿತ 'ಕರ್ಣಾಟ ಭಾರತ ಕಥಾಮಂಜರಿ' ಎಂಬ ಕೃತಿಯಿಂದ ಆಯ್ದ 'ಕೌರವೇಂದ್ರನ ಕೊಂದೆ ನೀನು' ಎಂಬ ಪದ್ಯದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ :** ಈ ವಾಕ್ಯವನ್ನು ಕರ್ಣನು ಕೃಷ್ಣನಿಂದ ತನ್ನ ಜನ್ಮ ರಹಸ್ಯವನ್ನು ತಿಳಿದುಕೊಂಡು ಗೊಂದಲಕ್ಕೆ ಒಳಗಾಗಿ ಮನದಲ್ಲಿ ಅತೀವವಾಗಿ ನೊಂದುಕೊಳ್ಳುತ್ತಾನೆ. ಹಾಗೂ ಕೃಷ್ಣನ ವೈರತ್ವವನ್ನು ಕಟ್ಟಿಕೊಂಡ ತನ್ನ ಒಡೆಯನಿಗೆ ಒಳಿತಾಗದು ಎಂದು ಮನದಲ್ಲಿ ಹೇಳಿಕೊಳ್ಳುವ ಸಂದರ್ಭ ಇದಾಗಿದೆ.

**ಸ್ವಾರಸ್ಯ :** ಕರ್ಣನ ಸ್ವಾಮಿನಿಷ್ಠೆ ಹಾಗೂ ಹರಿಯ ಹಗೆತನ ವ್ಯರ್ಥವಾಗದು ಕರ್ಣನ ಜನ್ಮ ರಹಸ್ಯ ವಿಚಾರ ತಿಳಿದ ಕರ್ಣನ ಮನಸ್ಥಿತಿಯನ್ನು ಇಲ್ಲಿ ಕವಿ ಸ್ವಾರಸ್ಯಪೂರ್ಣವಾಗಿ ವರ್ಣಿಸಿದ್ದಾನೆ.

**VI. ಕೆಳಗಿನ ಕವಿ / ಸಾಹಿತಿಗಳ ಸ್ಥಳ, ಕಾಲ, ಕೃತಿ ಮತ್ತು ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ. 2*3=6**

**34.** ವಿ ಕೃ ಗೋಕಾಕ್

ಉತ್ತರ : **ವಿನಾಯಕ** ಕಾವ್ಯನಾಮದಿಂದ ಪ್ರಸಿದ್ಧರಾಗಿರುವ ಡಾ. ವಿನಾಯಕ ಕೃಷ್ಣ ಗೋಕಾಕ್ ಇವರು ಕ್ರಿ.ಶ.1909 ರಲ್ಲಿ ಹಾವೇರಿ ಜಿಲ್ಲೆಯ ಸವಣೂರು ಎಂಬ ಊರಿನಲ್ಲಿ ಜನಿಸಿದ್ದಾರೆ. ಇವರು ಸಮುದ್ರಾಚೆಯಿಂದ, ಸಮುದ್ರಗೀತೆಗಳು, ಪಯಣ, ಉಗಮ, ಇಜ್ಜೋಡು, ಸಮರಸವೇ ಜೀವನ', ಭಾರತ ಸಿಂಧುರಶ್ಮಿ ಮೊದಲಾದ ಕೃತಿಗಳನ್ನು ಬರೆದಿದ್ದಾರೆ. ಇವರ 'ದ್ಯಾವಾ ಪೃಥಿವೀ' ಕೃತಿಗೆ 'ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಸಮಗ್ರ ಸಾಹಿತ್ಯಕ್ಕಾಗಿ 'ಜ್ಞಾನಪೀಠ ಪ್ರಶಸ್ತಿ' ಬಂದಿವೆ. ಭಾರತ ಸರ್ಕಾರ ಪದ್ಮಶ್ರೀ ಪುರಸ್ಕಾರ ನೀಡಿ ಗೌರವಿಸಿದೆ.

**35.** ದ. ರಾ. ಬೇಂದ್ರೆ

ಉತ್ತರ : **ಅಂಬಿಕಾತನಯದತ್ತ** ಎಂಬ ಕಾವ್ಯನಾಮದಿಂದ ಪ್ರಸಿದ್ಧರಾಗಿರುವ **ದತ್ತಾತ್ರೇಯ ರಾಮಚಂದ್ರ ಬೇಂದ್ರೆ**ಯವರು ಕ್ರಿ.ಶ 1896ರಲ್ಲಿ **ಧಾರವಾಡ**ದಲ್ಲಿ ಜನಿಸಿದರು. ನವೋದಯ ಕನ್ನಡ ಸಾಹಿತ್ಯದ ಪ್ರಮುಖ ಕವಿಗಳಲ್ಲಿ ಒಬ್ಬರಾದ ದತ್ತಾತ್ರೇಯ. ರಾಮಚಂದ್ರ. ಬೇಂದ್ರೆ ಅವರು **ಗರಿ, ಕೃಷ್ಣಕುಮಾರಿ, ಉಯ್ಯಾಲೆ, ಸಖೀಗೀತ, ನಾದಲೀಲೆ, ಮೇಘದೂತ, ಗಂಗಾವತರಣ, ಸೂರ್ಯಪಾನ, ನಗೆಯ ಹೊಗೆ, ಸಾಹಿತ್ಯದ ವಿರಾಟ್ ಸ್ವರೂಪ** ಮೊದಲಾದ ಕೃತಿಗಳನ್ನು ರಚಿಸಿದ್ದಾರೆ. ಇವರ **ಅರಳು–ಮರಳು** ಕವನ ಸಂಕಲನಕ್ಕೆ **'ಕೇಂದ್ರ ಸಾಹಿತ್ಯ ಅಕಾಡೆಮೆ ಪ್ರಶಸ್ತಿ', ನಾಕುತಂತಿ** ಕವನ ಸಂಕಲನಕ್ಕೆ **'ಜ್ಞಾನಪೀಠ ಪ್ರಶಸ್ತಿ'** ಲಭಿಸಿದೆ.

**VII. ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗಿಸಿ, ಛಂದಸ್ಸಿನ ಹೆಸರನ್ನು ಬರೆಯಿರಿ. 1*3=3**

**3 4 3 4**

**U U U | - - | - U | U U U U**

**36.** ಹೊ ರೆ ದ | ದಾ ತಾ | ರಂ ಗೆ | ಹ ಗೆ ವ ರ = 14

3 4 3 4

**U U U | U U - | U U U | - -**

ಶಿ ರ ವ | ನ ರಿ ದೊ | ಪ್ಪಿ ಸು ವೆ | ನೆಂ ಬೀ = 14

3 4 3 4 3 4 2

**U U U | - U U | - U | - U U | - U | - - | -**

ಭ ರ ದೊ | ಳಿ ರ್ದ ನು | ಕೌ ರ | ವೇಂ ದ್ರ ನ | ಕೊಂ ದೆ | ನೀ ನೆಂ | ದ ॥ = 23

**ಛಂದಸ್ಸು :** ಭಾಮಿನಿ ಷಟ್ಪದಿ

**VIII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು ಸಮನ್ವಯಗೊಳಿಸಿರಿ. 1*3=3**

**37.** ಒಳಗಿನ ಮಂದಿ ಗುಂಡು ಹೊಡೆದರೋ ಮುಂಗಾರಿ ಸಿಡಿಲ ಸಿಡಿದ್ಹಾಂಗ

ಅಲಂಕಾರ : ಉಪಮಾಲಂಕಾರ ( ಧರ್ಮಲುಪ್ತೋಪಮಾಲಂಕಾರ )

ಲಕ್ಷಣ : ಎರಡು ವಸ್ತುಗಳಿಗಿರುವ ಸಾದೃಶ್ಯ ಸಂಪತ್ತನ್ನು ಹೋಲಿಸಿ ವರ್ಣಿಸಿದರೆ ಅದು ಉಪಮಾಲಂಕಾರ.

ಉಪಮೇಯ : ಒಳಗಿನ ಮಂದಿ ಗುಂಡು ಹೊಡೆಯುವುದು

ಉಪಮಾನ : ಮುಂಗಾರಿನ ಸಿಡಿಲು ಸಿಡಿಯುವುದು

ಉಪಮಾ ವಾಚಕ : ಹಾಂಗ

ಸಮಾನ ಧರ್ಮ : ಸ್ಪಷ್ಟವಾಗಿಲ್ಲ (ಸಿಡಿಯುವುದು)

ಸಮನ್ವಯ : ಇಲ್ಲಿ ಉಪಮೇಯವಾದ ಒಳಗಿನ ಮಂದಿ ಗುಂಡು ಹೊಡೆಯುವುದನ್ನು ಉಪಮಾನವಾದ ಮುಂಗಾರಿನ ಸಿಡಿಲು ಸಿಡಿಯುವುದಕ್ಕೆ ಪರಸ್ಪರ ಹೋಲಿಸಿ ವರ್ಣಿಸಲಾಗಿದೆ.

**IX. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ. 1*3=3**

**38.** ಎ) ಮನಸ್ಸಿದ್ದರೆ ಮಾರ್ಗ.

**ವೇದ ಸುಳ್ಳಾದರೂ ಗಾದೆ ಸುಳ್ಳಾಗದು** ಎಂಬುದು ಗಾದೆಗಳಿಗೆ ಅನ್ವಯಿಸುವ ಗಾದೆ ಮಾತಾಗಿದೆ. ಗಾದೆಗಳು ಹಿರಿಯರ ಅನುಭವದ ನುಡಿಗಳು, ಬದುಕಿನ ದಾರಿದೀಪಗಳು, ಇಂತಹ ಅನೇಕ ಗಾದೆಗಳು ಕನ್ನಡದಲ್ಲಿ ಬಳಕೆಯಲ್ಲಿವೆ ಅವುಗಳಲ್ಲಿ ಪ್ರಸ್ತುತ **ಮನಸ್ಸಿದ್ದರೆ ಮಾರ್ಗ** ಎಂಬ ಗಾದೆಯು ಅತ್ಯಂತ ಜನಪ್ರಿಯವಾಗಿದೆ.

ಪ್ರಸ್ತುತ ಗಾದೆಯು ಯಾವುದೇ ಕಾರ್ಯ ಯಶಸ್ವಿಯಾಗಬೇಕಾದರೆ ಮನಸ್ಸು ಮುಖ್ಯ ಮನಪೂರ್ವಕವಾಗಿ ಮಾಡಿದ ಕಾರ್ಯವು ಯಶಸ್ಸನ್ನು ತಂದುಕೊಡುತ್ತದೆ. ಅಂದರೆ ನಾವು ಮಾಡುವ ಕಾರ್ಯವನ್ನು ನಿಷ್ಠೆಯಿಂದ ಮಾಡಬೇಕು. ಜನ ಮೆಚ್ಚಿ ನಡಕೊಂಡರೆ ಏನುಂಟು ಲೋಕದಿ ಮನಮೆಚ್ಚಿ ನಡಕೊಂಬುದೇ ಚೆಂದ ಎಂದು ಶಿವಶರಣರು ಹೇಳಿದ ಮಾತು ಎಷ್ಟು ಸತ್ಯ. ನಂಬಿಕೆಯಿಂದ ಅಡಿ ಇಟ್ಟಾಗ ದಾರಿ ಸುಗಮವಾಗುತ್ತದೆ. ಧನಾತ್ಮಕವಾಗಿ ಮುನ್ನಡೆಯಬೇಕು ಎಂಬುದು ಈ ಗಾದೆಯ ಅರ್ಥವಾಗಿದೆ. ನಮ್ಮ ವ್ಯಕ್ತಿತ್ವ ಬೆಳಕಿಗೆ ಬರುವುದು ಮನಸ್ಸಿನ ಈ ಅಗಾಧ ಶಕ್ತಿಯನ್ನು ಬಳಸಿಕೊಂಡಾಗ ಮಾತ್ರ ಯಾವುದೇ ಕೆಲಸವಾದರೂ ಅತ್ಯಂತ ಮನಸ್ಸಿನಿಂದ ಮಾಡಬೇಕು.

**ಬಿ) ತಾಳಿದವನು ಬಾಳಿಯಾನು.**

ಕಿರಿದರಲ್ಲಿ ಹಿರಿದರ್ಥವನ್ನು ಹೊಂದಿರುವ ಗಾದೆಗಳು ವೇದಗಳಿಗೆ ಸಮ, **ವೇದಗಳು ಸುಳ್ಳಾದರೂ ಗಾದೆ ಮಾತುಗಳು ಸುಳ್ಳಾಗದು.** ಗಾದೆಗಳು ಹಿರಿಯರ ಅನುಭವದ ನುಡಿಮುತ್ತುಗಳು ಬದುಕಿನ ದಾರಿದೀಪಗಳಾಗಿವೆ ಇಂಥಹ ಅಸಂಖ್ಯ ಗಾದೆಗಳು ಕನ್ನಡ ಭಾಷೆಯಲ್ಲಿ ನಿತ್ಯ ಬಳಕೆಯಲ್ಲಿವೆ. ಇವುಗಳಲ್ಲಿ ಪ್ರಸ್ತುತ **ತಾಳಿದವನು ಬಾಳಿಯಾನು** ಎಂಬುದು ಒಂದು ಜನಪ್ರಿಯ ಗಾದೆ ಮಾತಾಗಿದೆ.

ಜೀವನವೇ ಒಂದು ಹೋರಾಟ. ಈ ಹೋರಾಟದಲ್ಲಿ ಯಶಸ್ವಿಯಾಗಬೇಕಾದರೆ ನಿರಂತರ ಸಾಧನೆ ಪ್ರಯತ್ನ ಅಗತ್ಯ. ಮನುಷ್ಯನ ಜೀವನವು ನೂರಾರು ಸಮಸ್ಯೆಗಳಿಂದ ಕೂಡಿರುತ್ತದೆ. ಅಲ್ಲದೆ ನಾನಾ ತರಹದ ವ್ಯಕ್ತಿಗಳೊಡನೆ ವ್ಯವಹರಿಸುವುದು ನಮಗೆ ಅನಿವಾರ್ಯವಾಗಿರುತ್ತದೆ. **“ಕೋಪಂ ಅನರ್ಥ ಸಾಧನಂ”** ಎಂಬ ಮಾತಿನಂತೆ ಕೋಪವು ಕೆಡುಕನ್ನು ಉಂಟುಮಾಡುತ್ತದೆ. ಕ್ಷಣಕಾಲ ಕೋಪದ ಕೈಗೆ ಬುದ್ಧಿ ಕೊಟ್ಟರೆ ಅದು ನಮ್ಮನ್ನು ಮಾತ್ರವಲ್ಲದೆ ಅದಕ್ಕೆ ಗುರಿಯಾದವರನ್ನೂ ಅಪಾಯಕ್ಕೆ ನೂಕುತ್ತದೆ ಕುಂಬಾರನು ಹಲವು ದಿನಗಳು ಶ್ರಮ ಪಟ್ಟು ತಯಾರಿಸಿ ಮಡಕೆಯನ್ನು ಒಂದು ದೊಣ್ಣೆಯಿಂದ ನಾಶ ಮಾಡಿದಂತೆ ಕೋಪವು ಅನಾಹುತವನ್ನು ಉಂಟುಮಾಡುತ್ತದೆ. ಆದರೆ ಅದನ್ನು ಸರಿಪಡಿಸಲಾಗುತ್ತದೆಯೇ ? ತಾಳ್ಮೆಯಿಂದ ಆಲೋಚಿಸಿ ಮುನ್ನಡೆದವರೇ ಜೀವನದಲ್ಲಿ ವಿಜಯಶಾಲಿಗಳಾಗಲು ಸಾಧ್ಯ. ಎಂಬುದು ಈ ಗಾದೆಯ ನೀತಿಯಾಗಿದೆ.

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ. 1*4=4**

**39.** ಕಲುಷಿತವಾದೀ ನದೀಜಲಗಳಿಗೆ
ಮುಂಗಾರಿನ ಮಳೆಯಾಗೋಣ
ಬರಡಾಗಿರುವೀ ಕಾಡುಮೇಡುಗಳ
ವಸಂತವಾಗುತ ಮುಟ್ಟೋಣ

***ಅಥವಾ***

ಮತಗಳೆಲ್ಲವು ಪಥಗಳು ಎನ್ನುವ
ಹೊಸ ಎಚ್ಚರದೊಳು ಬದುಕೋಣ
ಭಯ ಸಂಶಯದೊಳು ಕಂದಿದ ಕಣ್ಣೊಳು
ನಾಳಿನ ಕನಸನು ಬಿತ್ತೋಣ

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥ ಮಾಡಿಕೊಂಡು ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶವನ್ನು ಬರೆಯಿರಿ. 1*4=4**

**40.**ವೀರ ಕೌರವರಾಯನೇ ದಾ
ತಾರನಾತನ ಹಗೆಯೆ ಹಗೆ ಕೈ
ವಾರವೇ ಕೈವಾರವಾದಂತಹೆನು ಕುರುನೃಪತಿ
ಶೌರಿ ಕೇಳೈ ನಾಳೆ ಸಮರದ
ಸಾರದಲಿ ತೋರುವೆನು ನಿಜಭುಜ
ಶೌರಿಯದ ಸಂಪನ್ನತನವನು ಪಾಂಡುತನಯರಲಿ ॥

ಪ್ರಸ್ತುತ ಪದ್ಯಭಾಗವನ್ನು ಕುಮಾರವ್ಯಾಸ ವಿರಚಿತ 'ಕರ್ನಾಟ ಭಾರತ ಕಥಾಮಂಜರಿ' ಕೃತಿಯಿಂದ ಆಯ್ದ "ಕೌರವೇಂದ್ರನ ಕೊಂದೆ ನೀನು" ಎಂಬ ಪದ್ಯದಿಂದ ಆರಿಸಿಕೊಳ್ಳಲಾಗಿದೆ.

ಪಾಂಡವ (ಧರ್ಮದ) ಪಕ್ಷಪಾತಿಯಾದ ಕೃಷ್ಣನು ಕರ್ಣನನ್ನು ತಮ್ಮ ಕಡೆಗೆ ಕರೆತರಲು ಅನೇಕ ರೀತಿಯಿಂದ ಆಮಿಷಗಳನ್ನು ಒಡ್ಡುತ್ತಾನೆ. ಆದರೆ ಕರ್ಣನು ಇದ್ಯಾವುದನ್ನು ಲೆಕ್ಕಿಸದೆ ತನಗೆ ಆಶ್ರಯಕೊಟ್ಟ ಒಡೆಯನಿಗಾಗಿ ಹೋರಾಡುತ್ತೇನೆ. ನಿನ್ನ ವೀರರೈವರನು ನೋಯಿಸುವುದಿಲ್ಲ. ಎಂದು ಹೇಳುವ ಕರ್ಣನ ಸ್ವಾಮಿನಿಷ್ಠೆಯನ್ನು ಈ ಪದ್ಯ ಪ್ರತಿಪಾದಿಸುತ್ತದೆ.

**ಸಾರಾಂಶ :** ಕರ್ಣನು ವೀರ ಕೌರವರಾಯ ದುರ್ಯೋಧನನೇ ನನ್ನ ಒಡೆಯ ಆತನ ವೈರಿಗಳೇ ನನ್ನ ವೈರಿಗಳು, ಆತನ ಹೊಗಳಿಕೆಯೇ ನನ್ನ ಹೊಗಳಿಕೆ. "ಚತುರಂಗ (ಆನೆ, ಕುದುರೆ, ರಥ, ಕಾಲ್ದಳಗಳಿಂದ ಕೂಡಿದ ಸೈನ್ಯ) ಬಲದಿಂದ ಕೂಡಿದ ನಾಳಿನ ಮಹಾಭಾರತ ಯುದ್ಧದಲ್ಲಿ ಮೃತ್ಯುದೇವತೆಗೆ ಭೋಜನ ಕೂಟವಾಗುತ್ತದೆ. ಯುದ್ಧರಂಗದಲ್ಲಿ ಅಸಂಖ್ಯಾತ ಸಮರ ವೀರಯೋಧರನ್ನು ಕೊಂದು ಕೌರವನ ಋಣ ತೀರುವಂತೆ ಮಾಡುತ್ತೇನೆ. ಶೌರಿ ಯುದ್ಧದಲ್ಲಿ ಪರಾಕ್ರಮ(ಶೌರ್ಯ)ದ ಪ್ರದರ್ಶನ ತೋರುವೆನು ಎಂದು ಈ ಮೂಲಕ ಹೇಳುತ್ತಾನೆ.

**XII ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ. 2*4=8**

**41. ಲಂಡನ್ ನಗರ ವೀಕ್ಷಣೆಯಲ್ಲಿ ಲೇಖಕರು ಗುರುತಿಸಿರುವ ವಿಶೇಷತೆಗಳೇನು? ತಿಳಿಸಿ.**

**ಉತ್ತರ :** ಲಂಡನ್ ನಗರ ವೀಕ್ಷಣೆಯಲ್ಲಿ ಲೇಖಕರು ಲಂಡನ್ ನಗರದ ವ್ಯಾಪಾರ , ಟ್ರಾಮ್ ಬಸ್ಸುಗಳು ಭೂಗರ್ಭದಲ್ಲಿ ಓಡಾಡುವ ವ್ಯವಸ್ಥೆ ಮತ್ತು ಭೂಗರ್ಭವನ್ನು ಹತ್ತಿ ಇಳಿಯಲು ಇರುವ ಎಸ್ಕಲೇಟರ್ಸ್ ಕುರಿತು ಗುರುತಿಸಿದ್ದಾರೆ. ನಂತರ ಪೇಟೆಯಲ್ಲಿನ ವೂಲವರ್ಥ ಎಂಬ ಸ್ಟೇಷನರಿ ಅಂಗಡಿ. ಈ ಅಂಗಡಿಯಲ್ಲಿ ಸಿಗುವ ಬೂಟು, ಸಾಬೂನು, ಪುಸ್ತಕ , ಹೂವು , ಯುದ್ಧ ಸಾಮಾಗ್ರಿಗಳು ಮುಂತಾದ ವಸ್ತುಗಳನ್ನು ಹೆಸರಿಸಿದ್ದಾರೆ. ಆನಂತರ ಸೂಟು ಹೊಲಿಯುವ ಸಿಂಪಿಗಳ ಬಗ್ಗೆ ವಿವರಿಸಿದ್ದಾರೆ. ಲಂಡನ್ನಿನ ಹೆಣ್ಣು ಮಕ್ಕಳು ಮಾಣಿ, ಟೈಪಿಸ್ಟ್, ಕಾರಕೂನ ಮುಂತಾದ ಕೆಲಸದಲ್ಲಿ ನಿಯುಕ್ತರಾಗಿರುತ್ತಾರೆ ಎಂಬುದನ್ನು ಗುರುತಿಸಿದ್ದಾರೆ. ನಂತರ ಆಂಗ್ಲ ಸಾಮ್ರಾಜ್ಯದ ವೈಭವ ಕಂಡು ಬರುವ ಓಣಿ ಚೇರಿಂಗ್ ಕ್ರಾಸ್. ಈ ಓಣಿಯಲ್ಲಿನ ಇಂಡಿಯಾ ಆಫೀಸು ಮತ್ತು ಅದರ ವಿಶೇಷತೆ ಹಾಗೂ ಚೇರಿಂಗ್ ಕ್ರಾಸ್ ಎಂಬ ದೊಡ್ಡ ಬೀದಿಯು ಆಂಗ್ಲ ಸಾಮ್ರಾಜ್ಯದ ಬೀದಿ ಆಗಿರುವುದರ ವಿಶೇಷತೆಯನ್ನು ಗುರುತಿಸಿದ್ದಾರೆ. ನಂತರ ಟ್ರಾಫಲ್ಗಾರ್ ಸ್ಕ್ವೇರ್‌ನಲ್ಲಿರುವ ನೆಲ್ಸನ್ ಮೂರ್ತಿ ಮತ್ತು ಆತನ ವಿಶೇಷತೆಯನ್ನು ಹೇಳಿದ್ದಾರೆ. ಹೆಣ್ಣು ಮಕ್ಕಳ ವೈವಿಧ್ಯಮಯ ಟೊಪ್ಪಿಗೆಯ ವಿಶೇಷತೆಯನ್ನು ಕುರಿತು ಒಂದು ಟೊಪ್ಪಿಗೆಯಂತೆ ಇನ್ನೊಂದಿರುವುದಿಲ್ಲ. ಸಿಕ್ಕಿಸಿದ ಪುಚ್ಛವಾದರೂ ಕನಿಷ್ಟಪಕ್ಷ ಬೇರೆಯಾಗಿರುತ್ತದೆ ಎಂಬುದನ್ನು ಗುರುತಿಸಿದ್ದಾರೆ. 'ವೆಸ್ಟ್ ಮಿನ್‌ಸ್ಟರ್ ಅಬೆ' ಎಂಬ ಪ್ರಾರ್ಥನಾ ಮಂದಿರ ಒಂದು ವಿಶೇಷ ಸ್ಮಾರಕ. ಇದು ಸತ್ತಿರುವ ಸಂತರ, ಸಾರ್ವಭೌಮರ ಹಾಗೂ ಕವಿಪುಂಗವರ ಸ್ಮಾರಕವಾಗಿದೆ. ಕಬ್ಬಿಗರ ಸ್ಫೂರ್ತಿಯ ತವರು ಮನೆಯಾಗಿರುವುದು. ಪೊಯಟ್ಸ್ ಕಾರ್ನರ್‌ನಲ್ಲಿ ಪ್ರಸಿದ್ಧ ಇಂಗ್ಲೀಷ್ ಲೇಖಕರಾದ ಕಿಪ್ಲಿಂಗ್, ಹಾರ್ಡಿ, ಮ್ಯಾಕಾಲೆ, ಮೊದಲಾದವರ ಸಮಾಧಿಗಳಿವೆ. ನ್ಯೂಟನ್ ಮೊದಲಾದ ವಿಜ್ಞಾನಿಗಳ ಶಿಲಾ ಮೂರ್ತಿಗಳಿರುವುದು. ರಾಜಮಂದಿರದಲ್ಲಿ ಸಿಂಹದೆದೆಯ ರಿಚರ್ಡ್, 2ನೆಯ ಎಡ್ವರ್ಡ್, , ರಾಣಿ ಎಲಿಜಬೆತ್, ಮೊದಲಾದವರ ಮೂರ್ತಿಗಳಿವೆ. ಸಾಮ್ರಾಟರ ರಾಜ್ಯಾಭಿಷೇಕವಾಗುವ ಸಿಂಹಾಸನದ ಮೇಲಿರುವ ಕಲ್ಲುಪಾಟಿ ಹಾಗೂ ಈ ಕಲ್ಲುಪಾಟಿ ಎಂಬ ಶಿಲೆಯನ್ನೊಳಗೊಂಡ ರಾಜರ ಸಿಂಹಾಸನ ಸ್ಟೋನ್ ಆಫ್ ಸ್ಕೋನ್ ಮುಂತಾದವುಗಳ ವಿಶೇಷತೆಯನ್ನು ಗುರುತಿಸಿದ್ದಾರೆ.

**ಅಥವಾ**

**'ವೆಸ್ಟ್ ಮಿನ್‌ಸ್ಟರ್ ಅಬೆ' ಪ್ರಾರ್ಥನಾ ಮಂದಿರ ಒಂದು ಮಹಾಕೋಶದಂತಹ ವಿಶೇಷ ಸ್ಮಾರಕ ವಿವರಿಸಿ.**

**ಉತ್ತರ :** 'ವೆಸ್ಟ್ ಮಿನ್‌ಸ್ಟರ್ ಅಬೆ'ಎಂಬ ಪ್ರಾರ್ಥನಾ ಮಂದಿರ ಒಂದು ವಿಶೇಷ ಸ್ಮಾರಕ. ಇದು ಸತ್ತಿರುವ ಸಂತರ, ಸಾರ್ವಭೌಮರ ಹಾಗೂ ಕವಿಪುಂಗವರ ಸ್ಮಾರಕವಾಗಿದೆ. ಕನಿಷ್ಟ ಒಂದು ಸಾವಿರ ವರ್ಷದಷ್ಟು ಪುರಾತನವಾದ ಮಂದಿರ. ಸತ್ತವರಿಗೋಸ್ಕರ ಸ್ಥಾಪಿಸಿದ ಇದಕ್ಕಿಂತ ಘನತರವಾದ ಮಂದಿರವು ಜಗತ್ತಿನಲ್ಲಿ ಇನ್ನೆಲ್ಲಿಯೂ ಇರಲಾರದು. ಆದ್ದರಿಂದ ಇದನ್ನು ಸತ್ತವರ ಸ್ಮಾರಕ ಎಂದು ಕರೆಯುತ್ತಾರೆ. 300 ವರ್ಷಗಳ ಹಿಂದೆ ಬ್ಯೂಮಾಂಟ್ ಎಂಬ ಕವಿಯು

ಈ ಗೋರಿಯನ್ನು ನೋಡಿ ಮರ್ತ್ಯತ್ವವೇ ಎಷ್ಟೋ ಗೋರಿ ಗುಂಪುಗಳು ಇಲ್ಲಿವೆ ನೋಡಿ ಅಂಜು ಎಂಬ ಹಾಡನ್ನು ಬರೆದಿದ್ದಾನೆ. ಗೋಲ್ಡ್‌ಸ್ಮಿತ್ ಹಾಗು ಎಡಿಸನ್ ಎಂಬ ಪ್ರಖ್ಯಾತ ಸಾಹಿತಿಗಳು 'ವೆಸ್ಟ್‌ಮಿನ್‌ಸ್ಟರ್ ಅಬೆಯ ಸಂದರ್ಶನ' ಎಂಬ ವಿಷಯದ ಮೇಲೆ ಉತ್ತಮವಾದ ನಿಬಂಧಗಳನ್ನು ಬರೆದಿದ್ದಾರೆ. ಇಂದಿಗೂ ಇದು ಕಬ್ಬಿಗರ ಸ್ಫೂರ್ತಿಯ ತವರು ಮನೆಯಾಗಿದೆ. ಈ ಮಂದಿರದಲ್ಲಿ ಆಂಗ್ಲರ ಕೀರ್ತಿ ಧ್ವಜವನ್ನು ನಿಲ್ಲಿಸಿದ ಚತುರರಾಜಕಾರಣಿಗಳಾದ ಗ್ಯಾಡ್‌ಸ್ಟನ್, ಮಾಲ್ಫ್ ಡಿಸ್‌ರೇಲಿ ಮೊದಲಾದವರು ಶಿಲಾಮೂರ್ತಿಗಳಿವೆ. ಪೊಯಟ್ಸ್ ಕಾರ್ನರ್‌ನಲ್ಲಿ ಪ್ರಸಿದ್ಧ ಇಂಗಿಷು ಲೇಖಕರಾದ ಕಿಪ್ಲಿಂಗ್, ಹಾರ್ಡಿ, ಮ್ಯಾಕಾಲೆ, ಜಾನ್ಸನ್, ಗೋಲ್ಡ್ ಸ್ಮಿತ್ ರಾಷ್ಟ್ರಕವಿ ವರ್ಡ್ಸ್‌ವರ್ತ್, ಪ್ರಖ್ಯಾತ ನಾಟಕಕಾರ ಬೆನ್‌ಜಾನ್ಸನ್ ಮೊದಲಾದವರ ಸಮಾಧಿಗಳಿವೆ. ವೈಜ್ಞಾನಿಕರ ಮೂಲೆಯಲ್ಲಿ ನ್ಯೂಟನನ ದೊಡ್ಡದಾದ ಶಿಲಾಮೂರ್ತಿಯನ್ನು ನಿಲ್ಲಿಸಿದ್ದಾರೆ. ಡಾರ್ವಿನ್, ಹರ್ಶೆಲ್ ಮೊದಲಾದವರ ಮೂರ್ತಿಗಳಿವೆ. ಇದಕ್ಕೆ ಹತ್ತಿರದಲ್ಲಿ ವ್ಯಾಪಾರಿಗಳು, ವಾಸ್ತುಶಿಲ್ಪಿಗರು, ಸರದಾರರು, ಸೇನಾಪತಿಗಳು ಮೊದಲಾದ ಅನೇಕರಿಗೆ ಜಾಗವು ದೊರೆತಿದೆ. ರಾಜಮಂದಿರ ವಿಭಾಗದಲ್ಲಿ ಇಂಗ್ಲೆಂಡನ್ನು ಆಳಿದ ರಾಜ-ರಾಣಿಯರಾದ ಸಿಂಹದೆದೆಯ ರಿಚರ್ಡ್, 2ನೆಯ ಎಡ್ವರ್ಡ್, ರಾಣಿ ಎಲಿಜಬೆತ್, 1ನೆಯ ಜೇಮ್ಸ್ ಮೊದಲಾದವರ ಮೂರ್ತಿಗಳಿವೆ. ಇಲ್ಲಿಯ ಕೆತ್ತನೆಯ ಕೆಲಸವೆಲ್ಲ ಬಂಗಾರದ ಬಣ್ಣದಲ್ಲಿಯೇ ಆಗಿವೆ. ಮಂದಿರದ ಹಿಂದೆ ಭವ್ಯವಾಗಿ 7ನೆಯ ಹೆನ್ರಿಯ ಗೋರಿಯು ನಿಂತಿದೆ. ಹೀಗೆ ಇದೊಂದು ಪ್ರಾರ್ಥನಾ ಮಂದಿರವಾಗಿದ್ದರೂ ಬ್ರಿಟಿಷ್ ಸಾಮ್ರಾಜ್ಯದ ಇತಿಹಾಸ, ಕಲೆ, ಸಾಹಿತ್ಯ, ವಿಜ್ಞಾನದದ ಗುರುತುಗಳನ್ನು ಸ್ಮರಿಸುವ ಒಂದು ವಿಶೇಷ ಸ್ಮಾರಕವಾಗಿದೆ ಎಂದು ಹೇಳಬಹುದು.

**42.ಹಾರುವ ಹಕ್ಕಿಯನ್ನು ಕಾಲಗತಿಗೆ ಹೋಲಿಸುತ್ತಾ ಕವಿ ಬೇಂದ್ರೆಯವರು ಹೇಳಿರುವ ಮಾತುಗಳಾವುವು ?**

ಉತ್ತರ : ಕವಿ ದ.ರಾ.ಬೇಂದ್ರೆ ಅವರು 'ಹಕ್ಕಿ ಹಾರುತ್ತಿದೆ ನೋಡಿದಿರಾ' ಕವನದಲ್ಲಿ ಕಾಲದಗತಿಯನ್ನು ಹಾರುವ ಹಕ್ಕಿಯೊಂದಿಗೆ ಸಮೀಕರಿಸಿ ನೋಡುವ ಪ್ರಯತ್ನ ಮಾಡಿದ್ದಾರೆ. ಹಕ್ಕಿಯ ಹಾರುವಿಕೆ ಪ್ರಕೃತಿಯ ಸಹಜ ಕ್ರಿಯೆ.ಇದಕ್ಕೆ ಚಲನಶೀಲವಾದ ಕಾಲವನ್ನು ಹೋಲಿಸಿ ವರ್ಣಿಸಿದ್ದಾರೆ. ಕಾಲ, ರಾತ್ರಿ ಕಳೆದು ದಿನ ಬೆಳಕಾಗಿ ಹೀಗೆ ಪುನರಾವರ್ತನೆಯಾಗಿ ಮೇಲೆ, ಕೆಳಗೆ ಸುತ್ತಮುತ್ತ ಕಣ್ಣು ತೆರೆದು ರೆಪ್ಪೆ ಮುಚ್ಚುವುದರೊಳಗೆ ಗಾವುದ ರೀತಿಯಲಿ ವೇಗವಾಗಿ ಹಾರಿಹೋಗುತ್ತಿದೆ. ಇಂತಹ ಹಕ್ಕಿ ಹಾರಿ (ಕಾಲ ಕಳೆದು) ಹೋಗುವುದಕ್ಕೆ ತಡೆಯಿಲ್ಲ. ಹಕ್ಕಿಯ ಪುಚ್ಛ, ಗರಿ, ರೆಕ್ಕೆಗಳನ್ನು ಭೂತ, ವರ್ತಮಾನ, ಭವಿಷತ್ ಕಾಲಗಳಿಗೆ ಹೋಲಿಸಿದ್ದಾರೆ. ನೀಲಮೇಘ ಮಂಡಲಗಳ ಬಣ್ಣಗಳನ್ನು ಸಮನಾಗಿ ಆವರಿಸಿಕೊಂಡು ಸಮತೆಯನ್ನು ಕಾಣುತಿದೆ. ಮುಗಿಲಿಗೆ ರೆಕ್ಕೆಗೆಳೊಡೆದವೋ ಎಂಬಂತೆ ಅನಂತವಾಗಿ ಹಾರಿಹೋಗುತ್ತಿದೆ. ಚಿಕ್ಕೆಗಳ ಮಾಲೆಯನ್ನು ಕೊರಳಿಗೆ ಸಿಕ್ಕಿಸಿಕೊಂಡು, ಸೂರ್ಯಚಂದ್ರರನ್ನು ಕಣ್ಣುಗಳನ್ನಾಗಿ ಮಾಡಿಕೊಂಡು ಅನಂತದೆಡೆಗೆ ಹಾರಿಹೋಗಿದೆ ನೋಡಿದಿರಾ ಎಂಬ ಮಾತನ್ನು ಹೇಳುತ್ತಾರೆ. ರಾಜ್ಯ, ಸಾಮ್ರಾಜ್ಯಗಳನ್ನು ವೈಭವದಿಂದ ಮೆರೆಯುವಂತೆ ಮಾಡಿದ್ದು ಇದೇ ಕಾಲ. ರಾಜ-ಮಹಾರಾಜರ ಸಣ್ಣದೊಡ್ಡ, ಕೋಟೆ-ಕೊತ್ತಲಗಳನ್ನು ಗಬಕ್ಕನೆ ನಾಶಮಾಡಿದ್ದು ಕಾಲವೇ. ವಿಶ್ವದ ಎಲ್ಲಾ ಭಾಗಗಳನ್ನು ತೇಲಿಸಿ-ಮುಳುಗಿಸಿ, ಸಾರ್ವಭೌಮ ನೆತ್ತಿಯ ಕುಕ್ಕಿ ಹಾರಿಹೋಗಿದೆ. ಕಾಲವು ಯುಗಯುಗಗಳ ಹಣೆಬರೆಹವನ್ನು ಅಳಿಸಿ ಹಾಕಿ ಹೊಸತನದ ಭಾಗ್ಯವನ್ನು ತೆರೆದು ಕೊಟ್ಟಿದೆ. ಹೊಸಗಾಲದ ಹಸುಮಕ್ಕಳಿಗೆ ಹೊಸ ಚೇತನವನ್ನು ನೀಡುತ್ತ, ಉತ್ತಮ ಭವಿಷ್ಯಕ್ಕಾಗಿ ಹರಸಿದೆ. ಬೆಳ್ಳಿಚುಕ್ಕಿ ಎಂದು ಕರೆಯಲ್ಪಡುವ ಶುಕ್ರಗ್ರಹವೆಂಬ ಹಳ್ಳಿಯ ಮೇರೆಯನ್ನು ಮೀರಿ, ಚಂದ್ರಲೋಕಕ್ಕೆ ಏರಿ ನೀರಿನ್ನು ಹುಡುಕಿ ಹೀರಿದೆ. ಮಂಗಳ ಗ್ರಹದ ಅಂಗಳಕ್ಕೆ ಏರಿ ಹೋಗಿದೆ. ವೈಜ್ಞಾನಿಕವಾಗಿ ಭಾರತೀಯರು ಚಂದ್ರ,ಶುಕ್ರ, ಮಂಗಳನ ಅಂಗಳಕ್ಕೆ ಹೋಗಿ ಸಂಶೋಧನೆ ಮಾಡುವ ಗುರಿಯನ್ನು ಹೊಂದಿದ್ದಾರೆ ಎಂಬ ಮಾತನ್ನು ಪರೋಕ್ಷವಾಗಿ ಅಭಿವ್ಯಕ್ತಪಡಿಸಿದ್ದಾರೆ. ದಶದಿಕ್ಕುಗಳ ತುತ್ತತುದಿಗೆ ಮುಟ್ಟಿ ಅದರ ಆಚೆಗೆ ತನ್ನಯ ಚುಂಚವನ್ನು ಚಾಚಿದೆ. ಜಗತ್ತಿನ ಮೂಲವನ್ನು ಒಡೆಯಲು, ಪ್ರಪಂಚದ ವಿಸ್ಮಯವನ್ನು ಭೇಧಿಸಲೋ ಎಂಬಂತೆ ಹೊಂಚುಹಾಕಿದೆ ಎಂಬ ಮಾತನ್ನು ಹೇಳುತ್ತಾರೆ.

ಅಥವಾ

**ಕಾಲದ ಮುಂದೆ ಎಲ್ಲರೂ ತಲೆಬಾಗಲೇಬೇಕು ಎಂಬುದನ್ನು ಕವಿ ಹೇಗೆ ಸಾಧಿಸಿದ್ದಾರೆ. ವಿವರಿಸಿ.**

ಉತ್ತರ : ಕಾಲದಮುಂದೆ ಎಲ್ಲರೂ ಒಂದೇ ಎಂದು ತೋರಿಸಲು ಕಾಲದ ಹಕ್ಕಿಯು ನೀಲಮೇಘ ಮಂಡಲಗಳ ಬಣ್ಣಗಳನ್ನು ಸಮನಾಗಿ ಆವರಿಸಿಕೊಂಡು ಸಮತೆಯನ್ನು ಕಾಣುತಿದೆ. ಮುಗಿಲಿಗೆ ರೆಕ್ಕೆಗೆಳೊಡೆದವೋ ಎಂಬಂತೆ

ಅನಂತವಾಗಿ ಹಾರಿಹೋಗುತ್ತಿದೆ. ಚಿಕ್ಕೆಗಳ ಮಾಲೆಯನ್ನು ಕೊರಳಿಗೆ ಸಿಕ್ಕಿಸಿಕೊಂಡು, ಸೂರ್ಯಚಂದ್ರರನ್ನು ಕಣ್ಣುಗಳನ್ನಾಗಿ ಮಾಡಿಕೊಂಡು ಅನಂತದೆಡೆಗೆ ಹಾರಿಹೋಗಿದೆ ನೋಡಿದಿರಾ ಎಂಬ ಮಾತನ್ನು ಹೇಳುತ್ತಾರೆ. ರಾಜ್ಯ, ಸಾಮ್ರಾಜ್ಯಗಳನ್ನು ವೈಭವದಿಂದ ಮೆರೆಯುವಂತೆ ಮಾಡಿದ್ದು ಇದೇ ಕಾಲ. ರಾಜ–ಮಹಾರಾಜರ ಸಣ್ಣದೊಡ್ಡ, ಕೋಟೆ–ಕೊತ್ತಲಗಳನ್ನು ಗಬಕ್ಕನೆ ನಾಶಮಾಡಿದ್ದು ಕಾಲವೇ. ವಿಶ್ವದ ಎಲ್ಲಾ ಭಾಗಗಳನ್ನು ತೇಲಿಸಿ–ಮುಳುಗಿಸಿ, ಸಾರ್ವಭೌಮ ನೆತ್ತಿಯ ಕುಕ್ಕಿ ಹಾರಿಹೋಗಿದೆ. ಕಾಲವು ಯುಗಯುಗಗಳ ಹಣೆಬರೆಹವನ್ನು ಅಳಿಸಿ ಹಾಕಿ ಹೊಸತನದ ಭಾಗ್ಯವನ್ನು ತೆರೆದು ಕೊಟ್ಟಿದೆ. ಹೊಸಗಾಲದ ಹಸುಮಕ್ಕಳಿಗೆ ಹೊಸ ಚೇತನವನ್ನು ನೀಡುತ್ತ, ಉತ್ತಮ ಭವಿಷ್ಯಕ್ಕಾಗಿ ಹರಸಿದೆ. ಬೆಳ್ಳಿಚುಕ್ಕಿ ಎಂದು ಕರೆಯಲ್ಪಡುವ ಶುಕ್ರಗ್ರಹವೆಂಬ ಹಳ್ಳಿಯ ಮೇರೆಯನ್ನು ಮೀರಿ, ಚಂದ್ರಲೋಕಕ್ಕೆ ಏರಿ ನೀರಿನ್ನು ಹುಡುಕಿ ಹೀರಿದೆ. ಮಂಗಳ ಗ್ರಹದ ಅಂಗಳಕ್ಕೆ ಏರಿ ಹೋಗಿದೆ. ವೈಜ್ಞಾನಿಕವಾಗಿ ಭಾರತೀಯರು ಚಂದ್ರ,ಶುಕ್ರ, ಮಂಗಳನ ಅಂಗಳಕ್ಕೆ ಹೋಗಿ ಸಂಶೋಧನೆ ಮಾಡುವ ಗುರಿಯನ್ನು ಹೊಂದಿದ್ದಾರೆ ಎಂಬ ಮಾತನ್ನು ಪರೋಕ್ಷವಾಗಿ ಅಭಿವ್ಯಕ್ತಪಡಿಸಿದ್ದಾರೆ. ದಶದಿಕ್ಕುಗಳ ತುತ್ತತುದಿಗೆ ಮುಟ್ಟಿ ಅದರ ಆಚೆಗೆ ತನ್ನಯ ಚುಂಚವನ್ನು ಚಾಚಿದೆ. ಜಗತ್ತಿನ ಮೂಲವನ್ನು ಒಡೆಯಲು, ಪ್ರಪಂಚದ ವಿಸ್ಮಯವನ್ನು ಭೇಧಿಸಲೋ ಎಂಬಂತೆ ಹೊಂಚುಹಾಕಿದೆ ಎಂಬ ಮಾತನ್ನು ಅವಲೋಕಿಸಿದಾಗ ಕಾಲದ ಮುಂದೆ ಎಲ್ಲರೂ ತಲೆ ಬಾಗಲೇಬೇಕು ಎಂಬುದು ಕವಿಯ ಅಭಿಪ್ರಾಯ ಸ್ಪಷ್ಟವಾಗಿದೆ.

**XIII ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ. 01*04=04 (2+2)**

**43.** ರಾಮಕೃಷ್ಣ ಪರಮಹಂಸರು ಪರಮದೈವಭಕ್ತ. ಯಾವಾಗಲೂ ದೇವರನ್ನು ಕುರಿತು ಚಿಂತಿಸುತ್ತಿದ್ದರು. ಅವರಿಗೆ ಎಲ್ಲರಲ್ಲಿಯೂ ದೇವರ ಭಾವನೆಯಿತ್ತು. ಅವರು ಸಾಧಾರಣ ಗುರುಗಳಲ್ಲ. ದೇವರನ್ನು ನೋಡುವ ಶಕ್ತಿಯ ಮಟ್ಟದಲ್ಲಿರುವ ಗುರುಗಳು. ಧ್ಯಾನ ಮಾಡುವಾಗಲೆಲ್ಲಾ ದೇವರ ಜೊತೆ ಮಾತನಾಡುತ್ತಾ ಕಾಲ ಕಳೆಯುತ್ತಿದ್ದರು ಎಂದು ಅವರ ಶಿಷ್ಯರು ಹೇಳುತ್ತಿದ್ದರು. ಅವರು ಹೇಳುತ್ತಿದ್ದರು "ಮುಗ್ಧ ಮನಸ್ಸುಳ್ಳವರು ದೊಡ್ಡ ಜ್ಞಾನಿಗಳಾಗುವರು". ಅವರ ಮನಸ್ಸನ್ನು ನಾವು ಅರ್ಥ ಮಾಡಿಕೊಂಡರೆ ಅವರೆಷ್ಟು ಮಹಾತ್ಮರೆಂದು ಗೊತ್ತಾಗುವುದು. ಅವರು ಎಲ್ಲಾ ಧರ್ಮಗಳನ್ನು ಹಾಗೂ ದೇವರನ್ನು ಗೌರವದಿಂದ ನೋಡುತ್ತಿದ್ದರು. ರಾಮಕೃಷ್ಣರು ತಮ್ಮ ಪತ್ನಿ ಶಾರದಾದೇವಿಯವರನ್ನು ತಾಯಿಯ ಭಾವನೆಯಿಂದ ನೋಡುತ್ತಿದ್ದರು. ಅವರು ಶಾರದಾದೇವಿಯವರನ್ನು ತಾಯಿ–ಮಗು ಭಾವನೆಯಿಂದ ನೋಡುತ್ತಿದ್ದರು. ಶಾರದಾದೇವಿಯವರಿಗೆ ಆರೋಗ್ಯ ಸರಿ ಇಲ್ಲದಿರುವಾಗ ಮಹಿಳೆಯರನ್ನು ಕಳುಹಿಸಿ ಶುಶ್ರೂಷೆ ಮಾಡಿಸುತ್ತಿದ್ದರು. ಶಾರದಾಮಾತೆಗೆ ಒಂದು ಚೂರು ನೋವಾಗದಂತೆ ಹೂವಿನ ತರಹ ನೋಡಿಕೊಳ್ಳುತ್ತಿದ್ದರು. ಅವರ ಗುಣಗಳು, ಆದರ್ಶಗಳು ತುಂಬಾ ಅದ್ಭುತ. ಅವರಿಂದಲೇ ವಿವೇಕಾನಂದ ಜಗತ್ತಿನಲ್ಲಿ ಮಹಾನ್ ವ್ಯಕ್ತಿಯಾಗಿದ್ದು.

ಪ್ರಶ್ನೆಗಳು :

1) ರಾಮಕೃಷ್ಣ ಪರಮಹಂಸರ ಬಗ್ಗೆ ಅವರ ಶಿಷ್ಯರ ಅಭಿಪ್ರಾಯವೇನು ?

ರಾಮಕೃಷ್ಣ ಪರಮಹಂಸರು ಪರಮದೈವಭಕ್ತ. ಯಾವಾಗಲೂ ದೇವರನ್ನು ಕುರಿತು ಚಿಂತಿಸುತ್ತಿದ್ದರು. ಅವರಿಗೆ ಎಲ್ಲರಲ್ಲಿಯೂ ದೇವರ ಭಾವನೆಯಿತ್ತು. ಅವರು ಸಾಧಾರಣ ಗುರುಗಳಲ್ಲ. ದೇವರನ್ನು ನೋಡುವ ಶಕ್ತಿಯ ಮಟ್ಟದಲ್ಲಿರುವ ಗುರುಗಳು. ಧ್ಯಾನ ಮಾಡುವಾಗಲೆಲ್ಲಾ ದೇವರ ಜೊತೆ ಮಾತನಾಡುತ್ತಾ ಕಾಲ ಕಳೆಯುತ್ತಿದ್ದರು ಎಂದು ಅವರ ಶಿಷ್ಯರು ಹೇಳುತ್ತಿದ್ದರು.

2) ಪರಮಹಂಸರು ಶಾರದಾದೇವಿಯವರ ಮೇಲೆ ಹೇಗೆ ಕಾಳಜಿ ವಹಿಸುತ್ತಿದ್ದರು ?

ರಾಮಕೃಷ್ಣರು ತಮ್ಮ ಪತ್ನಿ ಶಾರದಾದೇವಿಯವರನ್ನು ತಾಯಿಯ ಭಾವನೆಯಿಂದ ನೋಡುತ್ತಿದ್ದರು. ಅವರು ಶಾರದಾದೇವಿಯವರನ್ನು ತಾಯಿ–ಮಗು ಭಾವನೆಯಿಂದ ನೋಡುತ್ತಿದ್ದರು. ಶಾರದಾದೇವಿಯವರಿಗೆ ಆರೋಗ್ಯ ಸರಿ ಇಲ್ಲದಿರುವಾಗ ಮಹಿಳೆಯರನ್ನು ಕಳುಹಿಸಿ ಶುಶ್ರೂಷೆ ಮಾಡಿಸುತ್ತಿದ್ದರು. ಶಾರದಾಮಾತೆಗೆ ಒಂದು ಚೂರು ನೋವಾಗದಂತೆ ಹೂವಿನ ತರಹ ನೋಡಿಕೊಳ್ಳುತ್ತಿದ್ದರು.

**XIV. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ. 1*5=5**

**44.** ನಿಮ್ಮನ್ನು ಬೆಳಗಾವಿ ಜಿಲ್ಲೆಯ ನವಿಲುತೀರ್ಥದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ 'ಪ್ರಜ್ವಲ್' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ನಡೆದ 'ಶಿಕ್ಷಕರ ದಿನಾಚರಣೆ' ಕಾರ್ಯಕ್ರಮದ ವರದಿಯನ್ನು ಪ್ರಕಟಿಸುವಂತೆ ಕೋರಿ, ಬೆಳಗಾವಿಯಲ್ಲಿರುವ ವಿಜಯ ಕರ್ನಾಟಕ ದಿನಪತ್ರಿಕೆಯ ಸಂಪಾದಕರಿಗೆ ಮನವಿ ಪತ್ರ ಬರೆಯಿರಿ.

ಇಂದ, ದಿನಾಂಕ : 23-09-2019

ಪ್ರಜ್ವಲ್ ಸ್ಥಳ : ನವಿಲುತೀರ್ಥ

10 ನೆಯ ತರಗತಿ,
ಸರ್ಕಾರಿ ಪ್ರೌಢಶಾಲೆ,
ನವಿಲುತೀರ್ಥ,
ಬೆಳಗಾವಿ ಜಿಲ್ಲೆ.

ಇವರಿಗೆ,
ಮಾನ್ಯ ಸಂಪಾದಕರು,
'ವಿಜಯ ಕರ್ನಾಟಕ' ದಿನಪತ್ರಿಕೆ,
ಬೆಳಗಾವಿ.

ಮಾನ್ಯರೇ,

ವಿಷಯ : "ಶಿಕ್ಷಕರ ದಿನಾಚರಣೆಯ ಕಾರ್ಯಕ್ರಮದ ವರದಿಯನ್ನು ಪ್ರಕಟಿಸುವ ಕುರಿತು".

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ನಮ್ಮ ಶಾಲೆಯಲ್ಲಿ ದಿನಾಂಕ : 05-09-2019 ರಂದು 'ಶಿಕ್ಷಕರ ದಿನಾಚರಣೆ' ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಎಸ್.ಡಿ.ಎಂ.ಸಿ. ಅಧ್ಯಕ್ಷರು ಅಧ್ಯಕ್ಷತೆಯನ್ನು ವಹಿಸಿದ್ದರು. ಅವರು ತಮ್ಮ ಭಾಷಣದಲ್ಲಿ 'ಸದೃಢ ಸಮಾಜದ ತಳಹದಿ ಶಾಲೆಯಿಂದಲೇ ಆರಂಭ' ಎಂದು ಹೇಳುತ್ತ ಭಾವಿ ಸಮಾಜದ ಶಿಲ್ಪಿಗಳಾದ ಯುವಜನತೆಯ ಚಾರಿತ್ರ್ಯ ನಿರ್ಮಾಣ ಮಾಡುವವರು ಶಿಕ್ಷಕರು ಇಂಥಹ ಶಿಕ್ಷಕರಿಗೆ ಆದರ್ಶಪ್ರಾಯರಾದವರು ಸರ್ವೆಪಲ್ಲಿ ರಾಧಾಕೃಷ್ಣನ್ ಅವರ ಆದರ್ಶಗಳನ್ನು ಉಳಿಸುವ ಶಿಕ್ಷಕರನ್ನು ಗೌರವಿಸೋಣ, ಎಂದು ತಿಳಿಸುತ್ತ ಶುಭಾಶಯ ಕೋರಿದರು. ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮವನ್ನು ನಡೆಯಿಸಿಕೊಟ್ಟರು. ಪೋಷಕರು ಕಾರ್ಯಕ್ರಮದ ಬಗ್ಗೆ ಮೆಚ್ಚುಗೆಯನ್ನು ವ್ಯಕ್ತಪಡಿಸಿದರು. ಮುಖ್ಯಶಿಕ್ಷಕರು ಹಾಗೂ ಶಿಕ್ಷಕ ವರ್ಗದವರು ಕಾರ್ಯಕ್ರಮದಲ್ಲಿ ಹಾಜರಿದ್ದರು. ಈ ಕಾರ್ಯಕ್ರಮದ ಸವಿವರದ ವರದಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದ್ದು, ದಯಮಾಡಿ ಕಾರ್ಯಕ್ರಮದ ವರದಿಯನ್ನು ತಮ್ಮ ಪತ್ರಿಕೆಯಲ್ಲಿ ಪ್ರಕಟಿಸಬೇಕೆಂದು ಕೇಳಿಕೊಳ್ಳುತ್ತೇನೆ. ಈ ನನ್ನ ಕೋರಿಕೆಯು ಈಡೇರುವುದೆಂದು ನಂಬಿರುತ್ತೇನೆ.

ವಂದನೆಗಳೊಡನೆ,

ಇಂತಿ ತಮ್ಮ ವಿಶ್ವಾಸಿ
ಸಹಿ/-
( ಪ್ರಜ್ವಲ್ )

ಹೊರ ವಿಳಾಸ

| | |
|---|---|
| ಇಂದ,<br>ಕು॥ ಪ್ರಜ್ವಲ್<br>10 ನೆಯ ತರಗತಿ,<br>ಸರ್ಕಾರಿ ಪ್ರೌಢಶಾಲೆ,<br>ನವಿಲುತೀರ್ಥ, ಬೆಳಗಾವಿ ಜಿಲ್ಲೆ. | ಇವರಿಗೆ,<br>ಮಾನ್ಯ ಸಂಪಾದಕರು,<br>'ವಿಜಯ ಕರ್ನಾಟಕ' ದಿನಪತ್ರಿಕೆ,<br>ಬೆಳಗಾವಿ. |

**ಅಥವಾ**

ನಿಮ್ಮನ್ನು ರಾಮನಗರ ಜಿಲ್ಲೆಯ ಕನಕಪುರದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ಎಂದು ಭಾವಿಸಿಕೊಂಡು, ಬೆಂಗಳೂರಿನ ರಾಜಾಜಿನಗರದ ನಿವಾಸಿಯಾದ ನಿಮ್ಮ ಗೆಳೆಯ / ಗೆಳತಿಗೆ ನಿಮ್ಮ ವಿದ್ಯಾಭ್ಯಾಸದ ಪ್ರಗತಿಯನ್ನು ತಿಳಿಸಿ ಪತ್ರ ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ. 1*5=5**

**45**. ಎ) ಜ್ಞಾನಾರ್ಜನೆಯಲ್ಲಿ ಗ್ರಂಥಾಲಯಗಳ ಮಹತ್ವ

ಬಿ) ಅತಿವೃಷ್ಟಿಯಿಂದಾಗುವ ಪರಿಣಾಮಗಳು.

---- 0 0 0 0 ----

## – : ಮೌಲ್ಯಮಾಪನ ಸೂಚಿ :–

| | |
|---|---|
| 1. ಪ್ರತಿ ಸರಿ ಉತ್ತರಕ್ಕೆ 1 ಅಂಕದಂತೆ | 6 * 1 = 6 |
| 2. ಪ್ರತಿ ಸರಿ ಉತ್ತರಕ್ಕೆ 1 ಅಂಕದಂತೆ | 4 * 1 = 4 |
| 3. ಪ್ರತಿ ಸರಿ ಉತ್ತರಕ್ಕೆ 1 ಅಂಕದಂತೆ | 7 * 1 = 7 |
| 4. ಪ್ರತಿ ಸರಿ ಉತ್ತರಕ್ಕೆ 2 ಅಂಕದಂತೆ | 10 * 2 = 20 |
| 5. ಪ್ರತಿ ಸಂದರ್ಭ ಆಯ್ಕೆ, ಸಂದರ್ಭ, ಸ್ವಾರಸ್ಯಕ್ಕೆ 1 ಅಂಕದಂತೆ (3) | 6 * 3 = 18 |
| 6. ಕವಿ ಪರಿಚಯ ಸ್ಥಳ, ಕಾಲ, ಕೃತಿ, ಪ್ರಶಸ್ತಿ ವಾಕ್ಯರೂಪದಲ್ಲಿ ಬರೆದರೆ | 2 * 3 = 6 |
| 7. ಸರಿಯಾದ ಪ್ರಸ್ತಾರ, ಗಣವಿಭಾಗ, ಛಂದಸ್ಸಿ ಹೆಸರು ತಲಾ 1 ಅಂಕ (3) | 1 * 3 = 3 |
| 8. ಅಲಂಕಾರ ಹೆಸರು, ಲಕ್ಷಣ, ಸಮನ್ವಯ ತಲಾ 1 ಅಂಕ (3) | 1 * 3 = 3 |
| 9. ಗಾದೆ ಬರೆಹ ಮಹತ್ವ 1 ಅಂಕ ಅರ್ಥವಿವರಣೆ 2 ಅಂಕ ಒಟ್ಟು 3. | 1 * 3 = 3 |
| 10. ಕಂಠಪಾಠ ಪ್ರತಿ ಸರಿ ಸಾಲುಗಳಿಗೆ 1 ಅಂಕದಂತೆ 4 ಅಂಕ | 1 * 4 = 4 |
| 11. ಸಾರಾಂಶ ಆಯ್ಕೆ, ಮೌಲ್ಯ 1 ಅಂಕ 3 ಸಾರಾಂಶ ಒಟ್ಟು 4 ಅಂಕ | 1 * 4 = 4 |
| 12. ಪ್ರತಿ ಸರಿ ಉತ್ತರಗಳಿಗೆ 1 ಅಂಕ ಭಾಷಾಶೈಲಿ ವಿಷಯ 3 ಒಟ್ಟು 4ಅಂಕ | 2 * 4 = 8 |
| 13. ಗದ್ಯಾಂಶ ಓದಿ ಅರ್ಥಗ್ರಹಿಕೆ 2 ಪ್ರಶ್ನೆಗಳಿಗೆ 2 ಅಂಕದಂತೆ 4 ಅಂಕ | 1 * 4 = 4 |
| 14. ಇಂದ, ಗೆ, ಸಂಭೋದನೆ, 1 ಅಂಕ ವಿಷಯ, ಒಡಲು 2 ಅಂಕ ಸಹಿಯೊಂದಿಗೆ ಮುಕ್ತಾಯ 1 ಅಂಕ ಭಾಷಾ ಶೈಲಿ 1 ಅಂಕ ಒಟ್ಟು 5 | 1 * 5 = 5 |
| 15. ಪೀಠಿಕೆ 1 ಅಂಕ, ವಿಷಯ ನಿರೂಪಣೆ 2 ಅಂಕ ಮುಕ್ತಾಯ 1 ಅಂಕ ಭಾಷಾ ಶೈಲಿ ವಾಕ್ಯ ಜೋಡಣೆ 1 ಅಂಕ ಒಟ್ಟು 5 ಅಂಕ | 1 * 5 = 5 |

**ಒಟ್ಟು 45 ಪಶ್ನೆ 100 ಅಂಕಗಳು.**

ರಾಜು ಅವಳೇಕರ
ಕನ್ನಡ ಭಾಷಾ ಶಿಕ್ಷಕರು
ಸರ್ಕಾರಿ ಬಾಲಕಿಯರ ಪ್ರೌಢಶಾಲೆ,
ವಿಜಯಪುರ. ದೇವನಹಳ್ಳಿ ತಾಲ್ಲೂಕು.